ಇಲಾಖೆಯಿಂದ ಒದಗಿಸಲಾದ ಅನುದಾನ

12(42) ಶ್ರೀ ಗೋಪಾಲ ಭಂಡಾರಿ ಹೆಚ್:(ಕಾರ್ಕಳ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಮೊತ್ತದ ಕಾಮಗಾರಿಗಳನ್ನು 2009–10ನೇ ಆರ್ಥಿಕ ವರ್ಷದಲ್ಲಿ ಕೈಗೊಳ್ಳಲಾಗಿದೆ?

ಆ) ಪ್ರಸಕ್ತ ವರ್ಷದಲ್ಲಿ ಭಾರಿ ನೀರಾವರಿ ಮತ್ತು ಸಣ್ಣ ನೀರಾವರಿ ಇಲಾಖೆಯಿಂದ ಪ್ರತಿ ತಾಲ್ಲೂಕಿಗೆ ಎಷ್ಟೆಷ್ಟು ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಒದಗಿಸಲಾಗಿದೆ (ತಾಲ್ಲೂಕುವಾರು ವಿವರ ಒದಗಿಸುವುದು)

ಇ) ನಿಗದಿಪಡಿಸಿರುವ ಅನುದಾನದಲ್ಲಿ ಬಿಡುಗಡೆಯಾಗದ ಹಣವೆಷ್ಟು (ತಾಲ್ಲೂಕುವಾರು ಅನುದಾನದ ವಿವರ ಒದಗಿಸುವುದು)

ಶ್ರೀ ಬಸವರಾಜ ಬೊಮ್ಮಾಯಿ(ಜಲಸಂಪನ್ಮೂಲ ಸಚಿವರು):

ಅ) ಜಲ ಸಂಪನ್ಮೂಲ ಆಯವ್ಯಯದಲ್ಲಿ ಯೋಜನಾವಾರು ಅನುದಾನ ಹಂಚಿಕೆ ಮಾಡಲಾಗಿದೆ. ತಾಲ್ಲೂಕುವಾರು ಅನುದಾನ ನೀಡಲಾಗುತ್ತಿಲ್ಲ.

ಆ) 2010–11 ನೇ ಸಾಲಿನ ಆಯವ್ಯಯದಲ್ಲಿ ಸಣ್ಣ ನೀರಾವರಿ ಇಲಾಖೆಗೆ–ಯೋಜನೆ ಅಡಿ ರೂ.806.87 ಕೋಟಿಗಳು ಮತ್ತು ಯೋಜನೇತರ ಅಡಿ ರೂ.54.71 ಕೋಟಿಗಳು, ಒಟ್ಟು 861.58 ಕೋಟಿಗಳ ಅನುದಾನ ಒದಗಿಸಲಾಗಿದೆ. ಪ್ರಸ್ತುತ ಈ ಅನುದಾನವನ್ನು ತಾಲ್ಲೂಕುವಾರು, ಕಾಮಗಾರಿವಾರು ಹಂಚಿಕೆ ಮಾಡಿರುವುದಿಲ್ಲ.

ಇ) ಮೇಲಿನ ಉತ್ತರದ ಹಿನ್ನಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

'ಬಿ' ಸ್ಕೀಂ ನಡಿ ಹಂಚಿಕೆಯಾಗಿರುವ ನೀರಿನ ಪ್ರಮಾಣ

14(01) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಕ್ಕೆ 'ಬಿ' ಸ್ಕೀಂ ನಡಿ ಹಂಚಿಕೆಯಾಗಿರುವ ನೀರಿನ ಪ್ರಮಾಣವೆಷ್ಟು? (ಜಿಲ್ಲಾವಾರು ವಿವರಣೆ ನೀಡುವುದು).

ಆ) ಕೊಪ್ಪಳ ಜಿಲ್ಲೆಯ ಯಾವ ಯಾವ ತಾಲ್ಲೂಕಿಗೆ ಹಂಚಿಕೆ ಮಾಡಿರುವ ನೀರಿನ ಪ್ರಮಾಣವೆಷ್ಟು? (ತಾಲ್ಲೂಕುವಾರು ಹಾಗೂ ಹೆಕ್ಟೇರ್‌ವಾರು ಮಾಹಿತಿ ನೀಡುವುದು)

ಶ್ರೀ ಬಸವರಾಜ ಬೊಮ್ಮಾಯಿ(ಜಲಸಂಪನ್ಮೂಲ ಸಚಿವರು):

ಅ) ರಾಜ್ಯಕ್ಕೆ ಕೃಷ್ಣಾ ಕೊಳ್ಳದ ಸ್ಕೀಂ 'ಬಿ' ಅಡಿಯಲ್ಲಿ ನೀರಿನ ಹಂಚಿಕೆಯನ್ನು ಕೃಷ್ಣಾ ನ್ಯಾಯಾಧಿಕರಣದದಿಂದ ನಿರೀಕ್ಷಿಸಲಾಗಿದೆ.

ಆ) ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆಯು ಉದ್ಭವಿಸುವುದಿಲ್ಲ.

ಕೊಪ್ಪಳ ಜಿಲ್ಲೆಯ ಹಿರೇಹಳ್ಳ ಯೋಜನೆ

15(2) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲೆಯಲ್ಲಿ ಹಿರೇಹಳ್ಳಿ ಯೋಜನೆಯ 2000ನೇ ಸಾಲಿನಲ್ಲಿ ಉದ್ಘಾಟನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಬಂದಿದ್ದಲ್ಲಿ ಸದರಿ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ಕೆನಾಲ್‌ಗಳ ಸಂಖ್ಯೆ ಎಷ್ಟು; ಬಾಕಿ ಉಳಿದಿರುವ ಕೆನಾಲ್‌ಗಳ ಸಂಖ್ಯೆ ಎಷ್ಟು;

ಇ) ಹಿರೇಹಳ್ಳಿ ಯೋಜನೆಗೆ ನಿಗದಿಪಡಿಸಿದ ಅನುದಾನವೆಷ್ಟು; ಬಿಡುಗಡೆ ಮತ್ತು ಖರ್ಚು ಮಾಡಿ ಬಾಕಿ ಉಳಿದಿರುವ ಅನುದಾನವೆಷ್ಟು (ವಿವರ ನೀಡುವುದು)?

ಶ್ರೀ ಬಸವರಾಜು ಬೊಮ್ಮಾಯಿ(ಜಲಸಂಪನ್ಮೂಲ ಸಚಿವರು):

ಅ) ಬಂದಿದೆ

ಆ) ಈ ಯೋಜನೆಯಡಿಯಲ್ಲಿ ಎಡದಂಡೆ ಹಾಗೂ ಬಲದಂಡೆ ಮುಖ್ಯ ಕಾಲುವೆಗಳು ಬರುತ್ತಿದ್ದು, ಅವುಗಳ ವಿವರ ಕೆಳಕಂಡಂತಿವೆ.

1. ಎಡದಂಡೆ ಕಾಲುವೆ: ಈ ಕಾಲುವೆಯ ಅಡಿಯಲ್ಲಿ ಒಟ್ಟು 27 ವಿತರಣಾ ಕಾಲುವೆಗಳು ಬರುತ್ತಿದ್ದು, 26 ವಿತರಣಾ ಕಾಲುವೆಗಳ